# :: ಅಧಿಸೂಚನೆ ::

**ವಿಷಯ:** 2025-26ನೇ ಸಾಲಿಗೆ ಸಮಾಜ ಕಲ್ಯಾಣ ಇಲಾಖೆ ಮತ್ತು ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಅನುದಾನದಲ್ಲಿ ಕಲ್ಯಾಣ ಕರ್ನಾಟಕ ಭಾಗದಲ್ಲಿನ ಅಭ್ಯರ್ಥಿಗಳಿಗೆ ಐ.ಎ.ಎಸ್ ಹಾಗೂ ಕೆ.ಎ.ಎಸ್ ಪರೀಕ್ಷೆಗಳ ಪೂರ್ವಭಾವಿ ತರಬೇತಿಗೆ ಆಯ್ಕೆ ಮಾಡುವ ಸಂಬಂಧ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸುವ ಬಗ್ಗೆ.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2025-26ನೇ ಸಾಲಿನಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಅನುದಾನದಲ್ಲಿ ಕಲ್ಯಾಣ ಕರ್ನಾಟಕ ಭಾಗದಲ್ಲಿನ ಅಭ್ಯರ್ಥಿಗಳಿಗೆ ಐ.ಎ.ಎಸ್ ಹಾಗೂ ಕೆ.ಎ.ಎಸ್ ಪರೀಕ್ಷೆಗಳ ಪೂರ್ವಭಾವಿ ತರಬೇತಿ ನೀಡಲು ಉದ್ದೇಶಿಸಿದೆ.

ಐ.ಎ.ಎಸ್ ಹಾಗೂ ಕೆ.ಎ.ಎಸ್ ಪರೀಕ್ಷೆಗಳ ಪೂರ್ವಭಾವಿ ತರಬೇತಿಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಸಾಮಾನ್ಯ ಪ್ರವೇಶ ಪರೀಕ್ಷೆ ನಡೆಸಿ, ಪ್ರವೇಶ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಮತ್ತು ಮೀಸಲಾತಿ ಅನ್ವಯ ನಿಗದಿತ ಸಂಖ್ಯೆಗೆ ಅನುಗುಣವಾಗಿ ಆಯ್ಕೆ ಮಾಡಲಾಗುತ್ತದೆ.

ಐ.ಎ.ಎಸ್ ಹಾಗೂ ಕೆ.ಎ.ಎಸ್ ಪರೀಕ್ಷೆಗಳ ಪೂರ್ವಭಾವಿ ತರಬೇತಿಯ ಅವಧಿ, ಶೈಕ್ಷಣಿಕ ವಿದಾ ರ್ಹತೆ, ಅರ್ಜಿ ಸಲ್ಲಿಸಬೇಕಾದ ವೆಬ್‌ಸೈಟ್ ವಿಳಾಸ ಮತ್ತು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದ ವಿವರಗಳು ಈ ಕೆಳಗಿನಂತಿದೆ.

| **ಕ್ರ. ಸಂ** | **ವಿವರ** | | |
|---|---|---|---|
| 1 | ಯೋಜನೆ ಹೆಸರು ಮತ್ತು ಉದ್ದೇಶ | ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿನ ಅಭ್ಯರ್ಥಿಗಳಿಗೆ IAS & KAS ಪರೀಕ್ಷೆಗಳಿಗೆ ತರಬೇತಿ ನೀಡಿ ಈ ಭಾಗದ ಅಭ್ಯರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಯ್ಕೆ ಆಗಬೇಕು ಎಂಬ ಉದ್ದೇಶವಿದ್ದು, ಸದರಿ ತರಬೇತಿಯು ಕೇವಲ ಕಲ್ಯಾಣ ಕರ್ನಾಟಕ ಜಿಲ್ಲೆಗಳಲ್ಲಿನ ಅಭ್ಯರ್ಥಿಗಳಿಗೆ ಅನ್ವಯವಾಗಿರುತ್ತದೆ. (ಜಿಲ್ಲೆಗಳ ಹೆಸರು: ಕಲಬುರಗಿ, ಕೊಪ್ಪಳ, ಬೀದರ, ಯಾದಗಿರಿ, ಬಳ್ಳಾರಿ, ರಾಯಚೂರು, ವಿಜಯನಗರ) | |
| 2 | **ಮೀಸಲಾತಿ ವಿವರ** | | |
| | **Category Name** | **Reservation Percentage** | **4% - ವಿಶೇಷ ಚೇತನ**<br>Right of person with disabilities act 2016 ರಂತೆ ಸಕ್ಷಮ ಪ್ರಾಧಿಕಾರದಿಂದ ವಿಶೇಷ ಚೇತನ ಪ್ರಮಾಣ ಪತ್ರ ಹೊಂದಿದವರು<br><br>**33% - ಮಹಿಳಾ ಮೀಸಲಾತಿ** |
| | Scheduled Caste (SC) | 40% | |
| | Scheduled Tribes (ST) | 10% | |
| | Other Backward Classes (OBC) | 32% | |
| | GM | 18% | |
| | Total | 100% | |
| 3 | **OBCs Group is divided among five groups as under** | | |
| | Category 1 | 4% | |
| | 2A Category | 15% | |
| | 2B Category | 4% | |
| | 3A Category | 4% | |
| | 3B Category | 5% | |
| | **Total** | **32%** | |
| 4 | ಪರೀಕ್ಷಾ ಶುಲ್ಕ | ಅರ್ಜಿ ಸಲ್ಲಿಸಲಾಗುವ ಎಲ್ಲಾ ಅಭ್ಯರ್ಥಿಗಳಿಗೆ ಪರೀಕ್ಷಾ ಶುಲ್ಕದಿಂದ ವಿನಾಯಿತಿ ನೀಡಲಾಗಿದೆ. | |
| 5 | ತರಬೇತಿ ಅವಧಿ | 10 ತಿಂಗಳು | |
| 6 | ವಯೋಮಿತಿ | 21 ರಿಂದ 37 ವರ್ಷ. | |
| 7 | ಕೋರ್ಸಿನ ವಿವರ | ಕೇಂದ್ರ ಲೋಕಸೇವಾ ಆಯೋಗ ಮತ್ತು ಕರ್ನಾಟಕ ಲೋಕಸೇವಾ ಆಯೋಗ ಕ್ರಮವಾಗಿ ಪ್ರತಿ ವರ್ಷ ಐ.ಎ.ಎಸ್, ಐ.ಎಫ್.ಎಸ್. ಐ.ಪಿ.ಎಸ್, ಐ.ಆರ್.ಎಸ್. ಮೊದಲಾದ 23 ವಿವಿಧ ಸೇವೆಗಳ ಹುದ್ದೆಗಳು ಮತ್ತು ಕೆ.ಎ.ಎಸ್ ಹುದ್ದೆಗಳ ನೇಮಕಾತಿಗೆ ನಡೆಸುವ ಪರೀಕ್ಷೆಗಳ ಸಿದ್ದತೆಗೆ (ಗೆಜೆಟೆಡ್ ಪ್ರೊಬೆಷನರಿ ಆಫೀಸರ್ಸ್) ತರಬೇತಿ | |

| | | |
|---|---|---|
| | | ನೀಡಬೇಕಾಗಿರುತ್ತದೆ.<br>ಸದರಿ ತರಬೇತಿಗೆ ಪದವಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುವ ಮತ್ತು ಪದವಿ ಅಂತಿಮ ಸೆಮಿಸ್ಟರ್‌ನಲ್ಲಿ ವ್ಯಾಸಂಗ ಮಾಡುತ್ತಿರುವ ಅಭ್ಯರ್ಥಿಗಳು ಸಹ ಅರ್ಜಿ ಸಲ್ಲಿಸಲು ಅರ್ಹರಿದ್ದು, ಆಯ್ಕೆ ಪ್ರಕ್ರಿಯೆಯ ದಾಖಲಾತಿ ಪರಿಶಿಲನೆಯ ಹಂತದಲ್ಲಿ ಪದವಿ ವ್ಯಾಸಂಗ ಮುಕ್ತಾಯಗೊಳಿಸಿರುವ ಬಗ್ಗೆ ಅಧಿಕೃತ ದಾಖಲೆಗಳನ್ನು ಹೊಂದಿರಬೇಕು ಮತ್ತು ಸಲ್ಲಿಸಬೇಕು. |
| 8 | ಅಭ್ಯರ್ಥಿಯ ಸಾಮಾನ್ಯ ಅರ್ಹತೆ | 1. ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು.<br>2. ಕಡ್ಡಾಯವಾಗಿ ಕಲ್ಯಾಣ ಕರ್ನಾಟಕ ಭಾಗದ ಅಭ್ಯರ್ಥಿ ಆಗಿರಬೇಕು. 371(ಜೆ) ಪ್ರಮಾಣ ಪತ್ರವನ್ನು ಹೊಂದಿರಬೇಕು.<br>3. ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ನಿಗದಿತ ನಮೂನೆಯಲ್ಲಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರವನ್ನು ಪಡೆದಿರಬೇಕು.<br>4. ವಿಶೇಷ ಚೇತನ ಮೀಸಲಾತಿಯ ಅಡಿ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳ ನಿಗದಿತ ಪ್ರಾಧಿಕಾರದಿಂದ ನಿಗದಿಪಡಿಸಲಾದ ಕೊನೆಯ ದಿನಾಂಕದೊಳಗೆ ವಿಶೇಷ ಚೇತನ ಪ್ರಮಾಣ ಪತ್ರ ಪಡೆದಿರಬೇಕು. |
| 9 | ವಾರ್ಷಿಕ ಅದಾಯ | ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ ರೂ.5.00 ಲಕ್ಷ ಮೀರಬಾರದು. |
| 10 | ಆಯ್ಕೆ ವಿಧಾನ | 1. ಅಭ್ಯರ್ಥಿಗಳನ್ನು ಸಾಮಾನ್ಯ ಪ್ರವೇಶ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುತ್ತದೆ.<br>2. ಪ್ರವೇಶ ಪರೀಕ್ಷೆಯನ್ನು ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ವತಿಯಿಂದ ನಡೆಸಲಾಗುತ್ತದೆ. |
| 11 | ಸೌಲಭ್ಯಗಳು | ಆಯ್ಕೆಯಾದ ಅಭ್ಯರ್ಥಿಗಳಿಗೆ ಉತ್ತಮವಾದ ತರಬೇತಿ ಸಂಸ್ಥೆಯಿಂದ ಪರೀಕ್ಷಾ ಪೂರ್ವ ತರಬೇತಿ ಕೇಂದ್ರ ಕಲಬುರಗಿಯಲ್ಲಿ ಉಚಿತವಾಗಿ ತರಬೇತಿ ನೀಡಲಾಗುವುದು. ತರಬೇತಿಯ ಅವಧಿಯಲ್ಲಿ ಯಾವುದೇ ರೀತಿಯ ಶಿಷ್ಯವೇತನ ಅಥವಾ ವಸತಿ ಸೌಲಭ್ಯ ನೀಡಲಾಗುವುದಿಲ್ಲ. |
| 12 | ತರಬೇತಿ ಪ್ರವೇಶ ಪರೀಕ್ಷೆಗೆ ಅಭ್ಯರ್ಥಿಗಳ ಅಯ್ಕೆ ಸಂಖ್ಯೆ | IAS - 100<br>KAS - 400 |

**<u>ಅರ್ಜಿ ಸಲ್ಲಿಸಲು ದಿನಾಂಕಗಳು:</u>**

1. ಆನ್‌ಲೈನ್ ಅರ್ಜಿ ಸಲ್ಲಿಸಲು ಪ್ರಾರಂಭಿಕ ದಿನಾಂಕ: 07-05-2026
2. ಆನ್‌ಲೈನ್ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 21-05-2026
3. ಆನ್‌ಲೈನ್ ಮೂಲಕ ಪ್ರವೇಶ ಪತ್ರ ಡೌನಲೊಡ್ ದಿನಾಂಕ: 28-05-2026 ರಿಂದ
4. ಪ್ರವೇಶ ಪರೀಕ್ಷೆಯ ದಿನಾಂಕ: 31-05-2026

**<u>ಗಮನದಲ್ಲಿಡಬೇಕಾದ ಅಂಶಗಳು:</u>**

1. NIC (https://kalaburagi.nic.in) ವೆಬ್‌ಸೈಟ್ ನಲ್ಲಿ ಕಾಲಕಾಲಕ್ಕೆ ನೀಡಲಾಗುವ ಮಾಹಿತಿಯು ಅಧಿಕೃತ ಹಾಗೂ ಅಂತಿಮವಾಗಿರುತ್ತದೆ.
2. UPSC/KPSC, IAS/KAS ಸ್ಪರ್ಧಾತ್ಮಕ ಪರೀಕ್ಷೆಗೆ ಇಲಾಖೆಯಿಂದ ಈಗಾಗಲೇ ತರಬೇತಿ ಪಡೆದ ಅಭ್ಯರ್ಥಿಗಳು ಪುನ: ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ. SSC/RRB/ Banking/ Group-C. ಸ್ಪರ್ಧಾತ್ಮಕ ಪರೀಕ್ಷೆಗೆ ಇಲಾಖೆಯಿಂದ ತರಬೇತಿ ಪಡೆದ ಅಭ್ಯರ್ಥಿಗಳು ತರಬೇತಿಗೆ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ.
3. ಪರೀಕ್ಷಾ ಕೇಂದ್ರ: ಕಲಬುರಗಿ.
4. ಇಲಾಖೆಯ ವತಿಯಿಂದ ಯಾವುದೇ IAS/KAS ಪತ್ರ ವ್ಯವಹಾರವನ್ನು ನಡೆಸಲಾಗುವುದಿಲ್ಲವಾದುದರಿಂದ NIC (https://kalaburagi.nic.in) ವೆಬ್‌ಸೈಟ್ ಅನ್ನು ಕಾಲಕಾಲಕ್ಕೆ ವೀಕ್ಷಿಸತಕ್ಕದ್ದು ಹಾಗೂ NIC (https://kalaburagi.nic.in) ವೆಬ್‌ಸೈಟ್ ನಲ್ಲಿ ಸೂಚನೆಯಾನುಸಾರವಾಗಿ ಪ್ರವೇಶ ಪರೀಕ್ಷೆಗೆ ಅರ್ಜಿ ಸಲ್ಲಿಸುವುದು, ಪ್ರವೇಶ ಪರೀಕ್ಷಾ

ಪತ್ರವನ್ನು ಡೌನಲೋಡ್ ಮಾಡಿಕೊಂಡು ಸಾಮಾನ್ಯ ಪ್ರವೇಶ ಪರೀಕ್ಷೆಗೆ ಹಾಜರಾಗುವುದು. ಹಾಗೂ ಫಲಿತಾಂಶವನ್ನು ಸದರಿ ವೆಬ್‌ಸೈಟ್ ನಲ್ಲಿಯೆ ವೀಕ್ಷಿಸಬಹುದಾಗಿದೆ.

5. ತಪ್ಪು ಮಾಹಿತಿಯ ಕಾರಣದಿಂದ ಉಂಟಾಗಬಹುದಾದ ಲೋಪಗಳಿಗೆ ಸಂಬಂಧಪಟ್ಟ ಅಭ್ಯರ್ಥಿಗಳೇ ಜವಾಬ್ದಾರರಾಗಿರುತ್ತಾರೆ.
6. ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ವತಿಯಿಂದ ನಿಗದಿಪಡಿಸಿದ ದಿನಾಂಕದಂದು ಕೌನ್ಸಿಲಿಂಗ್, ಮೂಲ ದಾಖಲೆಗಳ ಪರಿಶೀಲನೆಗೆ ಹಾಜರಾಗದಿದ್ದಲ್ಲಿ ಅಂತಹ ಅಭ್ಯರ್ಥಿಗಳನ್ನು ಆಯ್ಕೆಗೆ ಪರಿಗಣಿಸುವುದಿಲ್ಲ. ಇಂತಹ ನಿರ್ಲಕ್ಷಕ್ಕೆ ಅಭ್ಯರ್ಥಿಗಳೇ ನೇರ ಹೊಣೆಗಾರರಾಗಿರುತ್ತಾರೆ.
7. ಕಡ್ಡಾಯವಾಗಿ ಪದವಿ ಪೂರ್ಣಗೊಳಿಸಿರುವ ಅಭ್ಯರ್ಥಿಗಳನ್ನು ಮಾತ್ರ ತರಬೇತಿಗೆ ಆಯ್ಕೆ ಮಾಡಲಾಗುವುದು.
8. ವಿಶೇಷ ಚೇತನ ಮೀಸಲಾತಿಯಡಿ ನಿಗದಿತ ಸ್ಥಾನಕ್ಕೆ ಅರ್ಹ ದಿವ್ಯಾಂಗ ಅಭ್ಯರ್ಥಿಗಳು ದೊರೆಯದಿದ್ದರೆ ಅದೇ ಮೀಸಲಾತಿಯ ಅಡಿ ಸಾಮಾನ್ಯ ಅಭ್ಯರ್ಥಿಯನ್ನು ಆಯ್ಕೆಗೆ ಅವಕಾಶ ಕಲ್ಪಿಸಲಾಗುವುದು. ಹಾಗೂ ನಿಗದಿತ ಸಂಖ್ಯೆಯಲ್ಲಿ ಮಹಿಳಾ ಅಭ್ಯರ್ಥಿಗಳು ದೊರೆಯದಿದ್ದರೆ ಅದೆ ಮೀಸಲಾತಿಯ ಅಡಿ ಅಭ್ಯರ್ಥಿಗಳಿಗೆ ಅವಕಾಶವನ್ನು ಕಲ್ಪಿಸಲಾಗುತ್ತದೆ.
9. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರೆ ಹಿಂದುಳಿದ ವರ್ಗದ ಮೀಸಲಾತಿಯಡಿ ನಿಗದಿತ ಸ್ಥಾನಕ್ಕೆ ಅರ್ಹ ಅಭ್ಯರ್ಥಿಗಳು ದೊರೆಯದಿದ್ದರೆ ಸಾಮಾನ್ಯ (ಜನರಲ್) ಅಭ್ಯರ್ಥಿಗಳಿಗೆ ಅವಕಾಶವನ್ನು ಕಲ್ಪಿಸಲಾಗುತ್ತದೆ.

ಜಂಟಿ ನಿರ್ದೇಶಕರು
ಸಮಾಜ ಕಲ್ಯಾಣ ಇಲಾಖೆ, ಕಲಬುರಗಿ